"ಡಿಸೆಂಬರ್ 28, 1994 ರಂದು ವಿಧಾನ ಮಂಡಲದ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಸಭೆಯ ಸದಸ್ಯರಾದ ನಾವು ರಾಜ್ಯಪಾಲರವರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇನೆ".

ಪ್ರಸ್ತಾವವನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು.

ಅಧ್ಯಕ್ಷರು :ವಂದನಾ ನಿರ್ಣಯದ ಪ್ರಸ್ತಾಪಕ್ಕೆ ಸಭೆಯ ಅನುಮತಿ ದೊರಕಿದೆ. ವಂದನಾ ನಿರ್ಣಯವನ್ನು ಸನ್ಮಾನ್ಯ ರಾಜ್ಯಪಾಲರಿಗೆ ಕಳುಹಿಸಿ ಕೊಡಲಾಗುವುದು.

ನಿಯಮ 69

ಬೆಂಗಳೂರು ನಗರ ಜನತೆ ಎದುರಿಸುತ್ತಿರುವ ತೀವ್ರ ಕುಡಿಯುವ ನೀರಿನ ಅಭಾವ ಪರಿಸ್ಥಿತಿಯ ಬಗ್ಗೆ

ಡಾ॥ ಜೀವರಾಜ ಆಳ್ವ : ಮಾನ್ಯ ಅಧ್ಯಕ್ಷರೆ, ನಾನು ಚರ್ಚೆ ಮಾಡುವುದಕ್ಕೆ ಹೋಗುವುದಿಲ್ಲ, ಅದರ ಬಗ್ಗೆ ಮುಖ್ಯಮಂತ್ರಿಗಳು ಸಭೆಯನ್ನು ಕರೆದಿದ್ದಾರೆ.

ಶ್ರೀ ಹೆಚ್.ಡಿ. ದೇವೇಗೌಡ : ಡಾ॥ ಜೀವರಾಜ ಆಳ್ವ, ಮಾನ್ಯ ನಂಜೇಗೌಡರು ಉಳಿದವರನ್ನು ಜೊತೆಯಲ್ಲಿ ಕರೆದುಕೊಂಡು ಹೋಗಿ ಎಲ್ಲೆಲ್ಲಿ ತಾತ್ಕಾಲಿಕವಾಗಿ ಪರಿಹಾರವನ್ನು ಕೊಟ್ಟು ಕುಡಿಯುವ ನೀರಿನ ವ್ಯವಸ್ಥೆ ಆಗಬೇಕೆಂದು ಹೇಳಿದ್ದಾರೆ ಮತ್ತು ಕೊಳಚಿಪ್ರದೇಶಗಳಲ್ಲಿ ಹೊಸದಾಗಿ ಲೈನುಗಳನ್ನು ಹಾಕಿಕೊಂಡಿದ್ದಾರೆ, ಅವುಗಳ ಬಗ್ಗೆ ನಾಳೆಯೇ ಪ್ರವಾಸ ಮಾಡಿ ನೋಡುತ್ತೇನೆ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ : ಮಾನ್ಯ ಅಧ್ಯಕ್ಷರೆ, ಮುಖ್ಯಮಂತ್ರಿಗಳು ಎದ್ದು ನಿಂತಿದ್ದಾರೆ. ಎಲ್ಲಾ ಸದಸ್ಯರು ಎಲ್ಲಿಗೆ ಒಟ್ಟಿಗೆಹೋಗುತ್ತಿದ್ದಾರೆ?

ಅಧ್ಯಕ್ಷರು : ಮಾನ್ಯ ಸದಸ್ಯರುಗಳೆ, ಈ ಅಲ್ಪಕಾಲಿನ ಅಧಿವೇಶನದ ಸಭೆಯಲ್ಲಿ ತಾವು ಭಾಗವಹಿಸಿ ನನಗೆ ನೀಡಿರತಕ್ಕ ಸಹಕಾರಕ್ಕಾಗಿ ಹಾಗೂ ಸೌಹಾರ್ದಕ್ಕಾಗಿ ನಾನು ಆಭಾರಿಯಾಗಿದ್ದೇನೆ. ತಮಗೆಲ್ಲರಿಗೂ ಶುಭವಾಗಲೆಂದು ಹಾರೈಸಿ ಈ ಸಭೆಯನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡುತ್ತೇನೆ.

(ಸದನವು ರಾತ್ರಿ 8 ಗಂಟೆ 45 ನಿಮಿಷಗಳಿಗೆ ಅನಿರ್ದಿಷ್ಟ ಕಾಲದವರೆಗೆ ಮುಂದೂಡಲ್ಪಟ್ಟಿತು)

+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ.